ಕೊಡಗು ಜಿಲ್ಲಾ ಪಂಚಾಯ್ತಿಯಲ್ಲಿ ಶೌಚಾಲಯ ನಿರ್ಮಿಸುವಲ್ಲಿ ಆಗಿದೆ ಎನ್ನಲಾದ ಅವ್ಯವಹಾರ.

1768(2153)

ಶ್ರೀ ಅಪ್ಪಚ್ಚು ರಂಜನ್ ಎಂ.ಎ.(ಸೋಮವಾರಪೇಟೆ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲಾ ಪಂಚಾಯಿತಿಯಲ್ಲಿ 25 ಲಕ್ಷ ರೂಪಾಯಿಯನ್ನು ಶೌಚಾಲಯ ನಿರ್ಮಿಸಲು ಟೆಂಡರ್ ಕರೆಯದೆ ಮುಂಗಡವಾಗಿ ಶಿಫ್ ಕಂಪನಿಯವರಿಗೆ ಗುತ್ತಿಗೆ ಕೊಟ್ಟಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಕಾನೂನು ಉಲ್ಲಂಘನೆ ಮಾಡಿದಂಥ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೆ; ಏವರ ನೀಡುವುದು;

ಆ) ಗುತ್ತಿಗೆ ತೆಗೆದುಕೊಂಡಂಥ ಶಿಫ್ ಕಂಪನಿಯವರು ನಿರ್ಮಿಸಿರುವ ಶೌಚಾಲಯ ಈಗಾಗಲೇ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಿದ್ದಿರುವುದು ರಾಜ್ಯ ಪತ್ರಿಕೆಗಳಲ್ಲಿ ಪ್ರಕಟಗೊಂಡಿದ್ದರೂ ಕೂಡ ಸರ್ಕಾರ ಮೌನವಾಗಿರಲು ಕಾರಣವೇನು (ಏವರ ನೀಡುವುದು)

ಇ) ಕಳಪೆ ಸಾಮಗ್ರಿಯನ್ನು ಬಳಸಿ ಶೌಚಾಲಯ ನಿರ್ಮಿಸಿರುವ ಶಿಫ್ ಕಂಪನಿಯ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ; ಏವರ ನೀಡುವುದು?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕಡಿಮೆ ವೆಚ್ಚದ ಶಾಲಾ ಶೌಚಾಲಯಗಳನ್ನು ಟರ್ನ್‌ಕಿ ಆಧಾರದ ಮೇಲೆ ನಿರ್ಮಿಸುವುದಕ್ಕಾಗಿ ರಾಜ್ಯ ಮಟ್ಟದಲ್ಲಿ ಗುರುತಿಸಿರುವ ಮೆಸರ್ಸ್: ಶಿಪ್ ಸಿಸ್ಟಮ್ಸ್, ಬೆಂಗಳೂರು ಈ ಸಂಸ್ಥೆಗೆ ಕೊಡಗು ಜಿಲ್ಲಾ ಪಂಚಾಯತಿಯವರು ಟೆಂಡರ್ ಕರೆಯದೆ 100 ಶಾಲಾ ಶೌಚಾಲಯಗಳ ನಿರ್ಮಾಣ ಕಲಸವನ್ನು ವಹಿಸಿದ್ದು, ಈ ಉದ್ದೇಶಕ್ಕಾಗಿ ಸದರಿ ಸಂಸ್ಥೆಗೆ ಬ್ಯಾಂಕ್ ಗ್ಯಾರಂಟಿ ಆಧಾರದ ಮೇಲೆ ರೂ.25.00 ಲಕ್ಷಗಳನ್ನು ಮುಂಗಡವಾಗಿ ನೀಡಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆ. ಈ ಕುರಿತು ಜಿಲ್ಲಾ ಪಂಚಾಯತಿಯಿಂದ ವರದಿಯನ್ನು ಪಡೆಯಲಾಗಿದ್ದು, ಅದು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಸದರಿ ಸಂಸ್ಥೆಯು ಪ್ರಯೋಗಾತ್ಮಕವಾಗಿ 2 ಶೌಚಾಲಯಗಳನ್ನು ನಿರ್ಮಿಸಿದ್ದು, ಅವು ಬಿದ್ದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.